ಕ್ರಮ ತೆಗೆದುಕೊಳ್ಳಲಾಗುವುದು.

ಸಿಂಧನೂರು ತಾಲ್ಲೂಕಿನ ಪೋಲೀಸ್ ಠಾಣೆಗಳಲ್ಲಿ ಸಿಬ್ಬಂದಿ ಕೊರತೆ.

164 (143)

ಶ್ರೀ ಹಂಪನಗೌಡ ಬಾದರ್ಲಿ (ಸಿಂಧನೂರು): ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಸಿಂಧನೂರು ತಾಲ್ಲೂಕಿನಲ್ಲಿರುವ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು ಈ ಠಾಣೆಗಳಲ್ಲಿ ಸಿಬ್ಬಂದಿ ವರ್ಗದವರ ಕೊರತೆ ಇದೆಯೇ?

ಆ. ಸಿಂಧನೂರು ತಾಲ್ಲೂಕು ಗ್ರಾಮೀಣ ಪೊಲೀಸ್ ಠಾಣೆಯನ್ನು ಮಂಜೂರು ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು):

ಅ. ಸಿಂಧನೂರು ತಾಲ್ಲೂಕಿನಲ್ಲಿ ಮೂರು ಪೊಲೀಸ್ ಠಾಣೆಗಳು ಇವೆ, ಸಿಬ್ಬಂದಿ ಕೊರತೆ ಇಲ್ಲ.

ಆ. ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆ ತೆರೆಯುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಹುಬ್ಬಳ್ಳಿ-ಧಾರವಾಡ ನಗರದಲ್ಲಿ ಅನಧಿಕೃತ ಮದ್ಯ ಮಾರಾಟ

166 (182)

ಶ್ರೀ ಹೊನ್ನಳ್ಳಿ ಜಬ್ಬರ್‌ಖಾನ್ ಹೈಯತ್ ಖಾನ್ (ಹುಬ್ಬಳ್ಳಿ): ಮಾನ್ಯ ಅಬಕಾರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಹುಬ್ಬಳ್ಳಿ-ಧಾರವಾಡ ಅವಳಿ ನಗರಗಳಲ್ಲಿ ಅನಧಿಕೃತವಾಗಿ ಮದ್ಯ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು? (ಪತ್ತೆ ಹಚ್ಚಿದ ಪ್ರಕರಣಗಳ ವಿವರ ನೀಡುವುದು)